KARN320007962008

**2ನೇ ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ,**

**ಕನಕಪುರ**

**ಸಿಸಿ ಸಂಖ್ಯೆ: 289/2008**

**ದಿನಾಂಕ: 01ನೇ ಏಪ್ರಿಲ್ 2026**

ಉಪಸ್ಥಿತರು: ಶ್ರೀ ವಿನಯ ವಿಠಲ ಕುಂದಾಪುರ, ಬಿ.ಎ.ಎಲ್, ಎಲ್.ಎಲ್.ಬಿ

2ನೇ ಅಧಿಕ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.

ನ್ಯಾಯಾಧೀಶರು, ಕನಕಪುರ.

**ಫಿರ್ಯಾದುದಾರರು :** **ಅಬಕಾರಿ ಪೊಲೀಸ್ ಠಾಣೆ, ಕನಕಪುರ.**

**(ಸರ್ಕಾರಿ ಸಹಾಯಕ ಅಭಿಯೋಜಕರವರಿಂದ)**

**ವಿರುದ್ಧ**

**ಆರೋಪಿ :** ನಾಗರಾಜ ಬಿನ್ ಮಾದೇಗೌಡ,

45 ವರ್ಷ ವಯಸ್ಸು,

ವಾಸ: ಗೆಂಡೆಗೆರೆ ಗ್ರಾಮ,

ಕಸಬಾ ಹೋಬಳಿ,

ಕನಕಪುರ ತಾಲ್ಲೂಕು.

**(ಶ್ರೀ ಎಮ್.ಜಿ. ವಕೀಲರವರಿಂದ)**

| | | |
|---|---|---|
| 1 | ಘಟನೆ ನಡೆದ ದಿನಾಂಕ | : 24.09.2001 |
| 2 | ಘಟನೆ ವರದಿ ಮಾಡಿದ ದಿನಾಂಕ | : 24.09.2001 |
| 3 | ಪಿರ್ಯಾದುದಾರರ ಹೆಸರು | : ಹೆಚ್. ಎನ್. ವೆಂಕಟೇಶ್ ಪ್ರಸನ್ನ |
| 4 | ವಿಚಾರಣೆ ಪ್ರಾರಂಭವಾದ ದಿನಾಂಕ | : 07.03.2026 |
| 5 | ವಿಚಾರಣೆ ಮುಕ್ತಾಯವಾದ ದಿನಾಂಕ | : 07.03.2026 |
| 6 | ಆರೋಪಿಸಲ್ಪಟ್ಟ ಅಪರಾಧಗಳು | : ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 |
| 7 | ತೀರ್ಪು ಉದ್ಘೋಷಣೆ ಮಾಡಿದ ದಿನಾಂಕ | :01.04.2026 |
| 8 | ನ್ಯಾಯಾಧೀಶರ ಅಭಿಪ್ರಾಯ | : ಆರೋಪಿಯನ್ನು ಅಪರಾಧಗಳಿಂದ ದೋಷ ಮುಕ್ತಗೊಳಿಸಿದೆ. |

**::ತೀರ್ಪು::**

ಆರಕ್ಷಕ ಉಪನಿರೀಕ್ಷಕರು ಕನಕಪುರ ಗ್ರಾಮಾಂತರ ಪೊಲೀಸ್ ಠಾಣೆ, ಇವರು ಆರೋಪಿಯ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಅಪರಾಧಗಳಿಗೆ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ.

**2. ಅಭಿಯೋಜನೆ ಪ್ರಕರಣದ ಸಂಕ್ಷಿಪ್ತ ಸಾರಾಂಶ ಈ ಕೆಳಗಿನಂತೆ ಇರುತ್ತದೆ:**

ಅಭಿಯೋಜನೆ ಪ್ರಕರಣದ ಸಂಕ್ಷಿಪ್ತ ಸಾರಾಂಶವೇನೆಂದರೆ, ಕನಕಪುರ ಗ್ರಾಮಾಂತರ ಪೊಲೀಸ್ ಠಾಣಾ ಸರಹದ್ದು ಕನಕಪುರ - ರಾಮನಗರ ರಸ್ತೆಯಲ್ಲಿನ ತಾಮಸಂದ್ರ ಸರ್ಕಲ್ ಬಳಿ ದಿನಾಂಕಃ 24.09.2001 ರಂದು ಬೆಳಿಗ್ಗೆ ಸುಮಾರು 08.30 ಗಂಟೆ ಸಮಯದಲ್ಲಿ ಆರೋಪಿಯು ಸರ್ಕಾರದಿಂದ ಯಾವುದೇ ಪರವಾನಗಿಯನ್ನು ಪಡೆಯದೇ ಅಕ್ರಮವಾಗಿ ಒಂದು ಕ್ಯಾನಿನಲ್ಲಿ ಸುಮಾರು 15 ಲೀ ಸೇಂದಿಯನ್ನು ಮಾರಾಟಕ್ಕಾಗಿ ಶೇಖರಿಸಿದ್ದು, ಇದು ಮಾನವನ ಸೇವನೆಗೆ ಯೋಗ್ಯವಲ್ಲದ ಸೇಂದಿಯಾಗಿದ್ದು, ಕಾನೂನು ಬಾಹಿರ ಕೃತ್ಯ ಎಸಗಿರುತ್ತಾರೆ ಎಂದು ಆರೋಪಿಯ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಅಪರಾಧಗಳಿಗೆ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ.

**3.** ಆರೋಪಿಯು ಜಾಮೀನಿನ ಮೇಲೆ ಬಿಡುಗಡೆ ಆಗಿದ್ದು, ಅವರಿಗೆ ದಂಡ ಪ್ರಕ್ರಿಯ ಸಂಹಿತೆ ಕಲಂ 207 ರಡಿಯಲ್ಲಿ ಅಭಿಯೋಜನೆಯ ಪರ ದಾಖಲೆಗಳನ್ನು ಒದಗಿಸಲಾಗಿರುತ್ತದೆ.

**4.** ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಅಪರಾಧಗಳಿಗೆ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ. ಅಪರಾಧಗಳಿಗೆ ದೋಷಾರೋಪಣೆಯನ್ನು ರಚಿಸಿ,

ಆರೋಪಿಗೆ ಓದಿ ಹೇಳಿದ್ದು ಅವರು ಅದನ್ನು ಅಲ್ಲಗಳೆದಿದ್ದರಿಂದ ವಿಚಾರಣೆಗೆ ಮುಂದೂಡಲಾಯಿತು.

**5.** ಅಭಿಯೋಜನೆಯು ದೋಷಾರೋಪಣೆ ಪಟ್ಟಿಯ 17 ಸಾಕ್ಷಿದಾರರಲ್ಲಿ, 1 ಸಾಕ್ಷಿದಾರರನ್ನು ಮಾತ್ರ ಚಾಸಾ-17 ರವರನ್ನು ಪ್ರಾ.ಸಾ-1 ಎಂಬುದಾಗಿ ವಿಚಾರಣೆಗೊಳಪಡಿಸಿರುತ್ತದೆ. ವಿಚಾರಣೆ ಮಾಡಿ ಯಾವುದೇ ದಾಖಲೆಗಳನ್ನು ಗುರುತಿಸಿರುವುದಿಲ್ಲ.

**6.** ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿನ ಆರೋಪಿಯ ಹೇಳಿಕೆಯನ್ನು ಪಡೆದುಕೊಳ್ಳಲಾಯಿತು. ಆರೋಪಿಯು ತಮ್ಮ ಪ್ರತಿರಕ್ಷೆಯಲ್ಲಿ ಯಾವುದೇ ಸಾಕ್ಷಿ ವಿಚಾರಣೆ ಮಾಡಿರುವುದಿಲ್ಲ ಹಾಗೂ ಯಾವುದೇ ದಾಖಲೆ ಹಾಜರುಪಡಿಸಿರುವುದಿಲ್ಲ.

**7.** ವಾದವನ್ನು ಆಲಿಸಲಾಯಿತು, ದಾಖಲೆಗಳನ್ನು ಪರಿಶೀಲಿಸಲಾಯಿತು.

**8.** ಅಭಿಯೋಜಕರು ಹಾಜರು ಪಡಿಸಿದ ಸಾಕ್ಷ್ಯಗಳ ಹೇಳಿಕೆಗಳನ್ನು, ನಿಶಾನೆಯಾಗಿ ಗುರುತಿಸಿಕೊಂಡಿರುವ ದಾಖಲಾತಿಗಳನ್ನು ಮತ್ತು ಉಭಯ ವಕೀಲರು ಮಂಡಿಸಿದ ವಾದ ವಿವಾದದ ಮೇರೆಗೆ ಈ ಕೆಳಕಂಡ ಅಂಶಗಳು ನನ್ನ ಗಮನಕ್ಕೆ ಬಂದಿರುತ್ತವೆ.

1. ಅಬಕಾರಿ ಪೊಲೀಸ್ ಠಾಣಾ ವ್ಯಾಪ್ತಿಯ ಕನಕಪುರ ತಾಲ್ಲೂಕು,

ಕನಕಪುರ - ರಾಮನಗರ ರಸ್ತೆಯಲ್ಲಿ ದಿನಾಂಕಃ 24.09.2001 ರಂದು ಬೆಳಿಗ್ಗೆ ಸುಮಾರು 08.30 ಗಂಟೆ ಸಮಯದಲ್ಲಿ ತಾಮಸಂದ್ರ ಸರ್ಕಲ್ ಬಳಿ ಆರೋಪಿಯಾದ ನೀವು, ಸರ್ಕಾರದಿಂದ ಯಾವುದೇ ಪರವಾನಗಿಯನ್ನು ಪಡೆಯದೇ ಅಕ್ರಮವಾಗಿ ಒಂದು ಕ್ಯಾನಿನಲ್ಲಿ ಸುಮಾರು 15 ಲೀ ಸೇಂದಿಯನ್ನು ಮಾರಾಟಕ್ಕಾಗಿ ಶೇಖರಿಸಿ, ಕಾನೂನುಬಾಹಿರ ಕೃತ್ಯ ಎಸಗಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯ್ದೆ ಕಲಂ 13, 14 ಮತ್ತು 34 ರಡಿ ಶಿಕ್ಷಾರ್ಹ ಅಪರಾಧ ಮಾಡಿರುತ್ತಾರೆಂದು ಅಭಿಯೋಜನೆಯು ಸಂಶಯಾತೀತವಾಗಿ ರುಜುವಾತು ಪಡಿಸುತ್ತದೆಯೇ ?

2. ಮೇಲ್ಕಂಡ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮಾನವನ ಸೇವನೆಗೆ ಯೋಗ್ಯವಲ್ಲದ ಸೇಂದಿಯನ್ನು ಸಂಗ್ರಹಿಸಿದ್ದು, ಆ ಮೂಲಕ ಭಾ. ದಂ. ಸಂಹಿತೆ ಕಲಂ 273 ರಡಿ ಶಿಕ್ಷಾರ್ಹ ಅಪರಾಧ ಮಾಡಿರುತ್ತಾರೆಂದು ಅಭಿಯೋಜನೆಯು ಸಂಶಯಾತೀತವಾಗಿ ರುಜುವಾತು ಪಡಿಸುತ್ತದೆಯೇ ?

3. ಯಾವ ಆದೇಶ ?

**9.** ಈ ಮೇಲ್ಕಂಡ ಅಂಶಗಳಿಗೆ ನ್ಯಾಯಾಲಯದ ಉತ್ತರ ಈ ಕೆಳಗಿನಂತಿದೆಃ

**ಅಂಶ-1 : ನಕಾರಾತ್ಮಕವಾಗಿ**

**ಅಂಶ-2 : ನಕಾರಾತ್ಮಕವಾಗಿ**

**ಅಂಶ-3 : ಅಂತಿಮ ಆದೇಶ**

## ಕಾರಣಗಳು

**10. ಅಂಶ-1 ಮತ್ತು 2 :-** ಸಂಗತಿಯ ಪುನರಾವರ್ತನೆಯನ್ನು ತಪ್ಪಿಸಲು ಹಾಗೂ ಈ ಅಂಶಗಳು ಒಂದಕ್ಕೊಂದು ಪೂರಕವಾಗಿರುವುದರಿಂದ ವಿಷಯಗಳ ಸಲುವಾಗಿ ಒಟ್ಟಿಗೆ ಚರ್ಚಿಸಲಾಗಿದೆ.

ಅಭಿಯೋಜನೆ ಪ್ರಕರಣದ ಸಂಕ್ಷಿಪ್ತ ಸಾರಾಂಶವೇನೆಂದರೆ, ಕನಕಪುರ ಗ್ರಾಮಾಂತರ ಪೊಲೀಸ್ ಠಾಣಾ ಸರಹದ್ದು ಕನಕಪುರ - ರಾಮನಗರ ರಸ್ತೆಯಲ್ಲಿನ ತಾಮಸಂದ್ರ ಸರ್ಕಲ್ ಬಳಿ ದಿನಾಂಕಃ 24.09.2001 ರಂದು ಬೆಳಿಗ್ಗೆ ಸುಮಾರು 08.30 ಗಂಟೆ ಸಮಯದಲ್ಲಿ ಆರೋಪಿಯು ಸರ್ಕಾರದಿಂದ ಯಾವುದೇ ಪರವಾನಗಿಯನ್ನು ಪಡೆಯದೇ ಅಕ್ರಮವಾಗಿ ಒಂದು ಕ್ಯಾನಿನಲ್ಲಿ ಸುಮಾರು 15 ಲೀ ಸೇಂದಿಯನ್ನು ಮಾರಾಟಕ್ಕಾಗಿ ಶೇಖರಿಸಿದ್ದು, ಇದು ಮಾನವನ

ಸೇವನೆಗೆ ಯೋಗ್ಯವಲ್ಲದ ಸೇಂದಿಯಾಗಿದ್ದು, ಕಾನೂನು ಬಾಹಿರ ಕೃತ್ಯ ಎಸಗಿರುತ್ತಾರೆ ಎಂದು ಆರೋಪಿಯ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಅಪರಾಧಗಳಿಗೆ ದೋಷಾರೋಪಣ ಪತ್ರ ಸಲ್ಲಿಸಿರುತ್ತಾರೆ.

**11.** ಅಭಿಯೋಜನೆಯು ಪ್ರಕರಣವನ್ನು ರುಜುವಾತು ಪಡಿಸಲು ತನ್ನ ಪರವಾಗಿ ಒಬ್ಬರು ಸಾಕ್ಷಿದಾರರನ್ನು ಪ್ರಾ.ಸಾ-1 ಎಂದು ವಿಚಾರಣೆಗೆ ಒಳಪಡಿಸಿದ್ದು, ಅವರುಗಳಲ್ಲಿ ಪ್ರಾ.ಸಾ-1 ರವರು ತನಿಖಾಧಿಕಾರಿಯಾಗಿರುತ್ತಾರೆ ಇವರನ್ನು ವಿಚಾರಣೆ ಮಾಡಿ ಯಾವುದೇ ದಾಖಲೆಗಳನ್ನು ಗುರುತಿಸಿರುವುದಿಲ್ಲ.

**12.** ಪ್ರಾ.ಸಾ-1 ಕೆ.ಎಸ್. ಮಹೇಶ್ ರವರು ತನಿಖಾಧಿಕಾರಿಯಾಗಿದ್ದು, ಸದರಿ ಸಾಕ್ಷಿದಾರರು ತಮ್ಮ ಮುಖ್ಯ ವಿಚಾರಣೆಯಲ್ಲಿ, ಈ ಪ್ರಕರಣದಲ್ಲಿ ಪ್ರಕರಣದ ಕಡತವನ್ನು ಕಮಲಾಕರ್ ಹೆಗಡೇಕರ್ ರವರಿಂದ ಪಡೆದುಕೊಂಡು ದಾಖಲಾತಿಯನ್ನು ಪರಿಶೀಲಿಸಿ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದು ಸಾಕ್ಷ್ಯ ನುಡಿದಿರುತ್ತಾರೆ.

ಸದರಿ ಸಾಕ್ಷಿದಾರರನ್ನು ಆರೋಪಿ ಪರ ವಕೀಲರು ಪಾಟೀ ಸವಾಲು ಮಾಡಿದ್ದು, ಪಾಟಿ ಸವಾಲಿನಲ್ಲಿ,

"…. ಅಂತಿಮ ದೋಷಾರೋಪಣ ಪಟ್ಟಿಯನ್ನು ಸಲ್ಲಿಸುವ ಮೊದಲು ಸಾಕ್ಷಿದಾರರ ಹೇಳಿಕೆಯನ್ನು ಪಡೆದಿರುವುದಿಲ್ಲ ಎಂದರೆ ಸರಿ. ಸಾಕ್ಷಿದಾರರು ಎಲ್ಲಿ ವಾಸವಾಗಿದ್ದಾರೆ ಎನ್ನುವ ಬಗ್ಗೆ ತನಿಖೆ ಮಾಡಿರುವುದಿಲ್ಲ ಎಂದರೆ ಸರಿ. ಸೇಂದಿಯನ್ನು ತಯಾರು ಮಾಡುತ್ತಿದ್ದರು ಎನ್ನುವ ಸಂಬಂಧ ಸ್ಥಳಕ್ಕೆ ಭೇಟಿ ನೀಡಿದ್ದೀರಾ ಎಂದರೆ ಸಾಕ್ಷಿದಾರರು ಇಲ್ಲ ಎಂದು ನುಡಿಯುತ್ತಾರೆ. ಸೇಂದಿ ಮಾರಾಟ ಮಾಡುತ್ತಿದ್ದರು ಎಂದು ಹೇಳುವ ಸ್ಥಳದ ಸರ್ವೆ ನಂಬರ್ ನಮೂದು ಮಾಡಿರುವುದಿಲ್ಲ ಎಂದರೆ ಸರಿ. ಈ ಪ್ರಕರಣದಲ್ಲಿ ಆರೋಪಿ ಯಾವುದೇ ಸೇಂದಿಯನ್ನು ಮಾರಾಟ ಮಾಡದಿದ್ದರೂ ಠಾಣಾ ಅಂಕಿ ಅಂಶಕ್ಕಾಗಿ ಸುಳ್ಳು ಅಂತಿಮ ವರದಿಯನ್ನು ಆರೋಪಿಯ ವಿರುದ್ಧ ಸಲ್ಲಿಸಿರುತ್ತೀರಿ ಎನ್ನುವುದನ್ನು ಅಲ್ಲಗಳೆದಿರುತ್ತಾರೆ…."

**13.** ಅಭಿಯೋಜನೆಯು ಈ ಪ್ರಕರಣದಲ್ಲಿ ಆರೋಪಿಯ ವಿರುದ್ಧ ಆರೋಪವನ್ನು ಸಾಬೀತುಪಡಿಸುವ ಸಲುವಾಗಿ ಚಾಸಾ-1 ರಿಂದ ಚಾಸಾ-17 ರವರನ್ನು ಸಾಕ್ಷಿಗಳನ್ನಾಗಿ ಗುರುತಿಸಿರುತ್ತದೆ. ಅವರುಗಳಲ್ಲಿ ಚಾಸಾ-1 ರಿಂದ ಚಾಸಾ-16 ರವರಿಗೆ ಸಾಕಷ್ಟು ಬಾರಿ ಸಮನ್ಸ್ ಜಾರಿ ಮಾಡಿದರೂ ನ್ಯಾಯಾಲಯಕ್ಕೆ ಹಾಜರಾಗಿ ಸಾಕ್ಷಿ ಹೇಳಿರುವುದಿಲ್ಲ. ಬಳಿಕ ದಿನಾಂಕಃ 28.08.2024 ರಿಂದ 25.03.2025 ರವರೆಗೆ ವಾರೆಂಟ್ ನ್ನು ಜಾರಿ ಮಾಡಿದರೂ,

ಚಾಸಾ-17 ರವರನ್ನು ಹೊರತುಪಡಿಸಿ ಬೇರೆ ಸಾಕ್ಷಿದಾರರು ನ್ಯಾಯಾಲಯಕ್ಕೆ ಹಾಜರಾಗಿ ಸಾಕ್ಷ್ಯ ನೀಡಿರುವುದಿಲ್ಲ. ಇದು ಸದರಿ ಸಾಕ್ಷಿದಾರರ ಬೇಜವಾಬ್ದಾರಿಯನ್ನು ತೋರಿಸುತ್ತದೆ. ಅಭಿಯೋಜನೆಯು ಸದರಿ ಸಾಕ್ಷಿದಾರರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿ ಆರೋಪಿಯ ವಿರುದ್ಧ ಆಪಾದನೆಯನ್ನು ಸಾಭೀತುಪಡಿಸುವಲ್ಲಿ ವಿಫಲರಾಗಿರುತ್ತಾರೆ. ಸದರಿ ಪ್ರಕರಣವನ್ನು 24.09.2001 ರಲ್ಲಿ ದಾಖಲಿಸಿದ್ದು, 2026 ರವರೆಗೆ ಅಂದರೆ ಸತತ 24 ವರ್ಷಗಳ ಕಾಲ ಸೇವಾನಿರತ ಒಬ್ಬ ಅಬಕಾರಿ ಸಿಬ್ಬಂದಿ ನ್ಯಾಯಾಲಯಕ್ಕೆ ಹಾಜರಾಗಿ ಸಾಕ್ಷಿ ನೀಡಿದ್ದು ಇತರೆ ಸಾಕ್ಷಿದಾರರು ಸಾಕ್ಷಿ ನೀಡುವಲ್ಲಿ ನಿರ್ಲಕ್ಷತೆಯನ್ನು ತೋರಿಸಿರುತ್ತಾರೆ. ಈ ಕಾರಣದಿಂದ ಅವರಿಂದ ಆರೋಪಗಳು 24 ವರ್ಷಗಳ ಕಾಲ ಕೇಸಿನ ಪ್ರಕರಣ ಚಾಲ್ತಿಯಲ್ಲಿದೆ. ಈ ಎಲ್ಲಾ ಕಾರಣಗಳಿಂದ ಅಭಿಯೋಜನೆಯ ಪರ ಸಾಕ್ಷ್ಯವನ್ನು ಮುಕ್ತಾಯಗೊಳಿಸಲಾಯಿತು. ನಂತರ ಆರೋಪಿಯ ವಿರುದ್ಧ ಯಾವುದೇ ವ್ಯತಿರಿಕ್ತ ಸಾಕ್ಷ್ಯ ಇಲ್ಲದಿದ್ದರು ಸಾಕ್ಷಿ-17 ರವರ ಹೇಳಿಕೆಯನ್ನು ಪರಿಗಣಿಸಿ, ಆರೋಪಿಯ ಹೇಳಿಕೆಯನ್ನು ದಂಡ ಪ್ರಕ್ರಿಯಾ ಸಂಹಿತೆಯ ಕಲಂ 313(1) (ಬಿ) ವಿಧಿಯನ್ವಯ ಪಡೆಯಲಾಯಿತು. ಚಾಸಾ-1 ರಿಂದ 16 ರವರು ನ್ಯಾಯಾಲಯಕ್ಕೆ ಗೈರು ಹಾಜರಾಗಿರುವುದರಿಂದ ಈ ಪ್ರಕರಣದಿಂದ ಕೈಬಿಡಲಾಗಿರುತ್ತದೆ. ಆರೋಪಿಯ ವಿರುದ್ಧ

ಯಾವುದೇ ಸಾಕ್ಷ್ಯವನ್ನು ನುಡಿದಿರುವುದಿಲ್ಲವಾದ್ದರಿಂದ ಅಭಿಯೋಜನೆಯು ಈ ಪ್ರಕರಣದಲ್ಲಿ ಯಾವುದೇ ಹುರುಳು ಇಲ್ಲವೆಂದು ಸ್ಪಷ್ಟವಾಗಿ ಕಂಡು ಬರುತ್ತದೆ. ಆರೋಪಿಯ ವಿರುದ್ಧ ಹೊರಿಸಲಾದ ಆರೋಪಗಳು ಕೇವಲ ಆರೋಪಗಳಾಗಿಯೇ ಉಳಿಯುತ್ತವೇ ವಿನಃ ಯಾವುದೇ ಸಾಕ್ಷ್ಯಾ ಧಾರಗಳಿಂದ ರುಜುವಾತು ಆಗಿರುವುದಿಲ್ಲ. ಆದ್ದರಿಂದ ಅಭಿಯೋಜನೆಯು ಆರೋಪಿಯ ವಿರುದ್ಧ ಆರೋಪಿಸಲಾದಂತಹ ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಅಪರಾಧವನ್ನು ಆರೋಪಿಯೇ ಮಾಡಿರುತ್ತಾನೆಂದು ರುಜುವಾತು ಪಡಿಸುವಲ್ಲಿ ಅಭಿಯೋಜನೆಯು ವಿಫಲವಾಗಿದೆ ಹಾಗೂ ಅಭಿಯೋಜನೆಯು ತನ್ನೆಲ್ಲಾ ಸಂಶಯಾತೀತ ಕಾರಣಗಳಿಂದಾಗಿ ಆರೋಪಿಯ ಮೇಲಿನ ಅಪರಾಧವನ್ನು ರುಜುವಾತು ಪಡಿಸಬೇಕೆಂಬುದು ಕ್ರಿಮಿನಲ್ ನ್ಯಾಯಶಾಸ್ತ್ರದ ಸಾಮಾನ್ಯ ನಿಯಮವಾಗಿದ್ದು, ಈ ಪ್ರಕರಣದಲ್ಲಿ ಅಭಿಯೋಜನೆಯು ಆರೋಪಿಯ ವಿರುದ್ಧದ ಆರೋಪಗಳನ್ನು ರುಜುವಾತು ಪಡಿಸುವಲ್ಲಿ ವಿಫಲವಾಗಿರುವುದರಿಂದ ಸಂಶಯದ ಲಾಭವನ್ನು ಆರೋಪಿಗೆ ಕೊಡಬೇಕಾಗಿರುವುದು ಸಾಮಾನ್ಯ ಕಾನೂನಿನ ತತ್ವವಾಗಿರುವುದರಿಂದ ಈ ಮೇಲಿನ **ಅಂಶ-1 ಮತ್ತು 2 ನ್ನು ನಕಾರಾತ್ಮಕವಾಗಿ** ಉತ್ತರಿಸಲಾಗಿದೆ.

**14. <u>ಅಂಶ-3</u>:** ಅಂಶ-1 ಮತ್ತು 2 ರಲ್ಲಿ ಹೇಳಲಾದ ಕಾರಣಗಳಿಂದಾಗಿ, ಆರೋಪಿಯ ವಿರುದ್ದ ಹೊರಿಸಲಾದ ಆರೋಪಗಳನ್ನು ಅಭಿಯೋಜನೆಯವರು ಸಂಶಯಾತೀತವಾಗಿ ಸಾಬೀತು ಪಡಿಸಲು ವಿಫಲರಾಗಿರುವ ಕಾರಣ ಆರೋಪಿಯು ಬಿಡುಗಡೆಗೆ ಅರ್ಹರಿರುತ್ತಾನೆಂದು ಪರಿಗಣಿಸಿ, ಈ ಕೆಳಕಂಡಂತೆ ಆದೇಶ ಮಾಡುತ್ತೇನೆ.

**<u>:ಆದೇಶ:</u>**

**ದಂಡ ಪ್ರಕ್ರಿಯಾ ಸಂಹಿತೆ 248(1) ರಡಿಯಲ್ಲಿ ಆರೋಪಿಯನ್ನು ಕರ್ನಾಟಕ ಅಬಕಾರಿ ಕಾಯ್ದೆ ಕಲಂ. 13, 14 ಮತ್ತು 34 ರ ಆಪಾದನೆಗಳಿಂದ ದೋಷ ಮುಕ್ತಗೊಳಿಸಿ ಖುಲಾಸೆ ಮಾಡಲಾಗಿದೆ.**

**ಆರೋಪಿಯ ವೈಯುಕ್ತಿಕ ಬಂಧ ಪತ್ರ ಮತ್ತು ಜಾಮೀನುದಾರರ ಜಾಮೀನು ಮುಚ್ಚಳಿಕೆ ಪತ್ರಗಳನ್ನು ರದ್ದು ಪಡಿಸಲಾಗಿದೆ.**

*(ಶೀಘ್ರಲಿಪಿಗಾರರಿಗೆ ಉಕ್ತಲೇಖನ ಕೊಟ್ಟು ಗಣಕೀಕೃತಗೊಳಿಸಿರುವುದನ್ನು ಪರಿಷ್ಕರಿಸಿ, ನಂತರ ಮುಕ್ತ ನ್ಯಾಯಾಲಯದಲ್ಲಿ ದಿನಾಂಕ **01**ನೇ ಏಪ್ರಿಲ್ **2026** ರಂದು ತೀರ್ಪನ್ನು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು).*

ಸಹಿ/-
**(ವಿನಯ .ವಿ. ಕುಂದಾಪುರ)**
**2ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಕನಕಪುರ.**

::ಅನುಬಂಧ::

1. <u>ಅಭಿಯೋಜನಾ ಪರ ವಿಚಾರಣೆ ಮಾಡಲಾದ ಸಾಕ್ಷಿ ಗಳು:</u>

ಪ್ರಾಸಾ-1 : ಕೆ.ಎಸ್. ಮಹೇಶ್

2. <u>ಅಭಿಯೋಜನಾ ಪರ ಹಾಜರು ಪಡಿಸಿದ ದಾಖಲೆಗಳು:</u>

ಇಲ್ಲಾ

3. <u>ಆರೋಪಿ ಪರ ವಿಚಾರಣೆ ಮಾಡಲಾದ ಸಾಕ್ಷಿ ಗಳು:</u>

ಇಲ್ಲಾ

4. <u>ಆರೋಪಿ ಪರ ಹಾಜರು ಪಡಿಸಿದ ದಾಖಲೆಗಳು:</u>

ಇಲ್ಲಾ

5. <u>ಸಾಕ್ಷಿ ಕಾಲಕ್ಕೆ ಗುರುತಿಸಲಾದ ಮುದ್ದೆಮಾಲುಗಳು:</u>

ಇಲ್ಲಾ

ಸಹಿ/-
**(ವಿನಯ .ವಿ. ಕುಂದಾಪುರ)**
**2ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಕನಕಪುರ.**

Judgment not ready
Call on: 01.04.2026

**2ನೇ ಅಧಿಕ ಸಿವಿಲ್ ಜಡ್ಜ್ ಮತ್ತು**
**ಜೆ.ಎಂ.ಎಫ್.ಸಿ., ಕನಕಪುರ.**

(ಮುಕ್ತ ನ್ಯಾಯಾಲಯದಲ್ಲಿ ತೀರ್ಪನ್ನು ಪ್ರಕಟಿಸಲಾಗಿದೆ
ಪ್ರತ್ಯೇಕ ಆದೇಶದ ಹಾಳೆಯನ್ನು ವೀಕ್ಷಿಸಿ)

**:ಆದೇಶ :**

ದಂಡ ಪ್ರಕ್ರಿಯಾ ಸಂಹಿತೆ 248(1) ರಡಿಯಲ್ಲಿ ಆರೋಪಿಯು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.13, 14 ಮತ್ತು 34 ರ ಆಪಾದನೆಗಳಿಂದ ದೋಷ ಮುಕ್ತಗೊಳಿಸಿ ಖುಲಾಸೆ ಮಾಡಲಾಗಿದೆ.

ಆರೋಪಿಯ ವೈಯುಕ್ತಿಕ ಬಂಧ ಪತ್ರ ಮತ್ತು ಜಾಮೀನುದಾರರ ಜಾಮೀನು ಮುಚ್ಚಳಿಕೆ ಪತ್ರಗಳನ್ನು ರದ್ದು ಪಡಿಸಲಾಗಿದೆ.

**2ನೇ ಅಧಿಕ ಸಿವಿಲ್ ಜಡ್ಜ್ ಮತ್ತು**
**ಜೆ.ಎಂ.ಎಫ್.ಸಿ., ಕನಕಪುರ.**